**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಇವರು ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ**

**ಸೂಚನೆ:- ರಾಜ್ಯದಲ್ಲಿ ಹಲವು ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿ, ನ್ಯಾಯಾಂಗದಿಂದ ಶಿಕ್ಷೆಗೆ ಗುರಿಯಾಗಿ ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ಶಿಕ್ಷೆಯನ್ನು ಅನುಭವಿಸುತ್ತಿರುವ ಕೈದಿಗಳಿಗೆ ಜೈಲಿನ ಅಧಿಕಾರಿ/ಸಿಬ್ಬಂದಿಗಳು ಜೈಲು ನಿಯಮಗಳನ್ನು ಉಲ್ಲಂಘಿಸಿ ಅಕ್ರಮವಾಗಿ ಮಾದಕ ವಸ್ತುಗಳನ್ನು, ಮೊಬೈಲ್ ಫೋನ್‌ಗಳನ್ನು, ಹಣವನ್ನು ಪೂರೈಕೆ ಮಾಡುತ್ತಿರುವುದು ಸರ್ವೇಸಾಮಾನ್ಯವಾಗಿದೆ. ಇತ್ತೀಚೆಗೆ ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಅಧಿಕಾರಿಗಳು ಜೈಲಿನ ಬ್ಯಾರಕ್‌ಗಳನ್ನು ಶೋಧಿಸಿದಾಗ ಸಾವಿರಾರು ರೂಪಾಯಿಗಳ ಕಂತೆ ಕಂತೆ ನೋಟುಗಳು ಮತ್ತು 32 ಜಿ.ಬಿ.ಯ ಪೆನ್‌ಡ್ರೈವ್‌ಗಳನ್ನು ಕೈದಿಗಳ ಬಳಿಯಿಂದ ವಶಪಡಿಸಿ ಕೊಂಡಿರುತ್ತಾರೆ. ಹಣ ಕೊಟ್ಟವರಿಗೆ ಪೋನ್/ವಿಡಿಯೋ ಕಾಲ್ ಬಳಸಲು ಅವಕಾಶವನ್ನು ನೀಡಲಾಗಿರುತ್ತದೆ. ಈ ಸಂಬಂಧ ಸರ್ಕಾರವು ಸಮಿತಿಯನ್ನು ರಚಿಸಿ ತನಿಖೆಗೆ ಆದೇಶವನ್ನು ನೀಡಿದ್ದ ಪರಿಣಾಮವಾಗಿ ತನಿಖೆಯನ್ನು ನಡೆಸಿದ್ದ ಅಧಿಕಾರಿಗಳ ವರದಿಯಲ್ಲಿರುವ ಶಿಫಾರಸ್ಸುಗಳನ್ನು ಯಥಾವತ್ ಪಾಲನೆ ಮಾಡದೇ, ವರದಿಯನ್ನು ನೀಡಿದ ಅಧಿಕಾರಿಗಳನ್ನೇ ಎತ್ತಂಗಡಿ ಮಾಡಿರುವುದು ದುರಾದೃಷ್ಟಕರ ಸಂಗತಿ. ಈ ಅಕ್ರಮಗಳನ್ನು ತಡೆಗಟ್ಟುವ ನಿಟ್ಟನಲ್ಲಿ ಸರ್ಕಾರವು ಕಠಿಣ ಕ್ರಮವಹಿಸುವ ಸಲುವಾಗಿ ದಿನಾಂಕ13-09-2022 ರಂದು ನಿಯಮ 72ರ ಅಡಿಯಲ್ಲಿ ಸದನದಲ್ಲಿ ಪ್ರಸ್ತಾಪಿಸಲು ಅನುಮತಿ ಕೋರುತ್ತೇನೆ.**

**ಉತ್ತರ :-** ವಿವಿಧ ದೃಶ್ಯ ಮಾಧ್ಯಮಗಳಲ್ಲಿ ದಿನಾಂಕ: 25-01-2022 ರಿಂದ 31-01-2022 ರವರೆಗೆ ಬೆಂಗಳೂರು ಕೇಂದ್ರ ಕಾರಾಗೃಹದ ಆಡಳಿತದ ವಿರುದ್ಧ ಸುದ್ದಿ ಪ್ರಸಾರವಾದ ಪ್ರಕರಣಕ್ಕೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 09 ಪಿಆರ್‌ಇ 2022, ದಿನಾಂಕ:29-01-2022 ರ ಮೇರೆಗೆ ಶ್ರೀ ಎಸ್. ಮುರುಗನ್, ಐ.ಪಿ.ಎಸ್., ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು (ಸಂಪರ್ಕ, ಲಾಜಿಸ್ಟಿಕ್ಸ್ ಮತ್ತು ಆಧುನೀಕರಣ), ಬೆಂಗಳೂರು ರವರನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಿ ಆದೇಶ ಹೊರಡಿಸಲಾಗಿರುತ್ತದೆ.

ಅದರನ್ವಯ, ವಿಚಾರಣಾಧಿಕಾರಿಗಳು ಪ್ರಕರಣದ ಕುರಿತು ವಿಚಾರಣೆ ನಡೆಸಿ ದಿನಾಂಕ: 07-06-2022 ರಂದು ವರದಿ ಸಲ್ಲಿಸಿ, ಪ್ರಕರಣದಲ್ಲಿ ಕರ್ತವ್ಯ ಲೋಪವೆಸಗಿದ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಕಠಿಣ ಶಿಸ್ತು ಕ್ರಮ / ಶಿಸ್ತು ಕ್ರಮ ಜರುಗಿಸಲು ಶಿಫಾರಸ್ಸು ಮಾಡಿ, ಕಾರಾಗೃಹದ ಭದ್ರತೆ ಹಾಗೂ ಕಾರಾಗೃಹದಲ್ಲಿ ಕಾನೂನು ಬಾಹಿರ ಚಟುವಟಿಕೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಶಿಫಾರಸ್ಸುಗಳನ್ನು ಮಾಡಿರುತ್ತಾರೆ. ಸದರಿ ವಿಚಾರಣಾಧಿಕಾರಿಗಳ ವರದಿಯ ಶಿಫಾರಸ್ಸನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ಅಗತ್ಯ ಕ್ರಮ ಜರುಗಿಸಲಾಗುತ್ತಿದೆ.

- ಪ್ರಕರಣದಲ್ಲಿ ಕರ್ತವ್ಯ ಲೋಪವೆಸಗಿರುವ ಒಟ್ಟು 14 ಜನ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಕರ್ತವ್ಯದಿಂದ ನಿಲಂಬನಗೊಳಿಸಲಾಗಿದೆ ಹಾಗೂ ಇತರೇ ಕಾರಾಗೃಹಗಳಿಗೆ ವರ್ಗಾಯಿಸಲಾಗಿದೆ.
- ಸದರಿ ಪ್ರಕರಣದಲ್ಲಿ ಒಟ್ಟು 17 ಜನ ಅಧಿಕಾರಿ ಮತ್ತು ಸಿಬ್ಬಂದಿಗಳ ವಿರುದ್ಧ 1957ರ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಯ ನಿಯಮ 11 ಮತ್ತು 13 ರಡಿಯಲ್ಲಿ ಜಂಟಿ ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಲಾಗುತ್ತಿದೆ.
- ವಿಚಾರಣಾಧಿಕಾರಿಗಳ ವರದಿಯನ್ನು ಅನುಷ್ಠಾನಗೊಳಿಸಲು ರಾಜ್ಯದ ಎಲ್ಲಾ ಕಾರಾಗೃಹಗಳ ಸುರಕ್ಷತೆ, ಭದ್ರತೆ ಹಾಗೂ ಸುಗಮ ಆಡಳಿತ ಹಿತದೃಷ್ಟಿಯಿಂದ ಸೂಕ್ತ ನಿರ್ದೇಶನ ಹಾಗೂ ಸೂಚನೆಗಳನ್ನು ನೀಡಲಾಗಿದೆ.
- ವಿಚಾರಣಾಧಿಕಾರಿಗಳ ವರದಿಯನ್ನಾಧರಿಸಿ, ಬೆಂಗಳೂರು ಕೇಂದ್ರ ಕಾರಾಗೃಹದ ಅಂದಿನ ಮುಖ್ಯ ಅಧೀಕ್ಷಕರು ಹಾಗೂ ಅಧೀಕ್ಷಕರನ್ನು ಬೆಂಗಳೂರು ಕೇಂದ್ರ ಕಾರಾಗೃಹದಿಂದ ವರ್ಗಾವಣೆಗೊಳಿಸಲಾಗಿದೆ. ಹಾಗೂ ಪರ್ಯಾಯವಾಗಿ ಪ್ರಸ್ತುತ ನಿಯೋಜಿಸಲಾಗಿರುವ ಮುಖ್ಯ ಅಧೀಕ್ಷಕರು ಮತ್ತು ಅಧೀಕ್ಷಕರಿಗೆ ಪ್ರಸ್ತಾಪಿತ ವಿಚಾರಣಾ ವರದಿಯಲ್ಲಿ ತಿಳಿಸಲಾದ ಲೋಪದೋಷ ಗಳನ್ನು ಸರಿಪಡಿಸಿಕೊಂಡು ಕರ್ತವ್ಯ ನಿರ್ವಹಿಸಲು ಸೂಚಿಸಲಾಗಿದೆ.
- ದಿನಾಂಕ:3-7-2022ರಂದು ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ಸದರಿ ಕಾರಾಗೃಹದ ಅಧಿಕಾರಿ ಮತ್ತು ಸಿಬ್ಬಂದಿಗಳು ಬಂದಿಗಳ ಬ್ಯಾರಕ್‌ಗಳ ತಪಾಸಣೆ ನಡೆಸಿದಾಗ ಒಂದು ಸಂಖ್ಯೆ 32 ಜಿಬಿ ಪೆನ್‌ಡ್ರೈವ್ ಹಾಗೂ ರೂ.97,270/-ಗಳ ನಗದು ಹಣ ದೊರೆತಿದ್ದು, ಈ ಬಗ್ಗೆ ದಿನಾಂಕ: 3-7-2022 ರಂದು ಬೆಂಗಳೂರು ಪ್ರರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 0238/2022 ರಲ್ಲಿ, Karnataka Prisons (Amendment) Act-2022 (U/s-42), IPC 1860 (U/s-424) ರಡಿಯಲ್ಲಿ ಪ್ರಕರಣ ದಾಖಲಾಗಿದ್ದು, ಪ್ರಸ್ತುತ ತನಿಖೆಯಲ್ಲಿರುತ್ತದೆ.

ಕಡತ ಸಂಖ್ಯೆ: ಹೆಚ್‌ಡಿ 156 ಪಿಆರ್‌ಇ 2022

(ಆರಗ ಜ್ಞಾನೇಂದ್ರ)
ಮಾನ್ಯ ಗೃಹ ಸಚಿವರು